**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 6681/2021**
**ಚಾಸಾ - 02 / ಪ್ರಾಸಾ - 03**

| | |
|---|---|
| ಹೆಸರು | **ಕೋಮಲ** |
| ಗಂಡನ ಹೆಸರು | **ನಾಗರಾಜು** |
| ವಯಸ್ಸು | **52** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ಪೆಮ್ಮನಹಳ್ಳಿ** |

**ದಿನಾಂಕಃ 24-09-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಪ್ರಾಸಾ-1 ರವರು ನನ್ನ ತಂಗಿ. ಪ್ರಾಸಾ-2 ರವರು ನನ್ನ ತಂದೆ. ದಿ.10-10-2021 ರಂದು ಬೆಳಗ್ಗೆ 11 ಗಂಟೆ ಸಮಯದಲ್ಲಿ 1 ನೇ ಆರೋಪಿ, ಬಸಣ್ಣ, ಪಾರ್ವತಮ್ಮ, ಸಿದ್ದಗಂಗಮ್ಮ, 3 ನೇ ಆರೋಪಿ , ಜಯಣ್ಣ, ರತ್ನಮ್ಮ ಮತ್ತು ಇತರರು ನನಗೆ ಹೊಡೆದರು. ನಮ್ಮನ್ನು ಹೊಡೆದು ಆಚೆ ಹಾಕಿ ಸುಮಾರು 25 ರಿಂದ 30 ವರ್ಷ ಆಗಿರುವ ತೇಗದ ಮರವನ್ನು ಕಡಿದಿದ್ದಾರೆ. ಸರ್ವೆ ನಂ.43/2 ರಲ್ಲಿ ಇರುವ 1 ಎಕರೆ 22 ಗುಂಟೆ ಜಮೀನಿನಲ್ಲಿ 70 ರಿಂದ 80 ಮರಗಳನ್ನು ಕಡಿದು ಹಾಕಿದ್ದಾರೆ. ಸರ್ವೆ ನಂ.38/1 ರಲ್ಲಿ ಇರುವ 33 ಗುಂಟೆ ಜಮೀನಿನಲ್ಲಿ 50 ರಿಂದ 60 ಮರಗಳನ್ನು ಕಡಿದಿದ್ದಾರೆ. ಅದೇ ದಿನದಂದು ನಾವು ಪೋಲೀಸರಿಗೆ ದೂರನ್ನು ನೀಡಿದ್ದೇವೆ.

ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಆ ದಿನದಂದು ಪೋಲೀಸರು ಸ್ಥಳಕ್ಕೆ ಬರಲಿಲ್ಲ, ಆದರೆ

ಮಾರನೇ ದಿನ ಸ್ಥಳಕ್ಕೆ ಬಂದು ಮಹಜರ್ ನ್ನು ಮಾಡಿದರು. ಈಗ ಸಾಕ್ಷಿಗೆ ನಿಪಿ-2 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ.ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಒಟ್ಟು ಸುಮಾರು 20 ಲಕ್ಷ ಮೌಲ್ಯದ ಮರಗಳನ್ನು ಕಡಿದು ಹಾಕಿದ್ದಾರೆ. ಪಂಚನಾಮೆ ಮಾಡುವ ಸಮಯದಲ್ಲಿ ಪೋಲೀಸರು ಮತ್ತೇನನ್ನೂ ಮಾಡಲಿಲ್ಲ. ಚಾಸಾ-4 ರವರು ಪೋಟೋವನ್ನು ತೆಗೆದುಕೊಂಡರು. ಈಗ ಸಾಕ್ಷಿಗೆ ನಿಪಿ-3 ರಿಂದ 7 ನ್ನು ತೋರಿಸಿದ್ದು, ಅವುಗಳನ್ನು ಪಂಚನಾಮೆ ಮಾಡುವ ಸಮಯದಲ್ಲಿ ತೆಗೆಯಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿದ್ದೇನೆ. ನಾನು ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಇಂದು ನ್ಯಾಯಾಲಯದ ಮುಂದೆ ಆರೋಪಿಗಳು ಹಾಜರಿದ್ದಾರೆ. ಅವರುಗಳ ಪೈಕಿ ಬಸಣ್ಣ, ಪಾರ್ವತಮ್ಮ, ಸಿದ್ದಗಂಗಮ್ಮ, ಜಯಣ್ಣ ಮತ್ತು ರತ್ನಮ್ಮರವರು ನ್ಯಾಯಾಲಯದ ಮುಂದೆ ಹಾಜರಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಎಪಿಪಿರವರು ಅರ್ಜಿಯನ್ನು ಸಲ್ಲಿಸಲು ಕಾಲಾವಕಾಶವನ್ನು ಕೋರಿದ್ದು, ಸಮಯ ನೀಡಲಾಯಿತು.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 6681/2021**
**ಚಾಸಾ - 04 / ಪ್ರಾಸಾ - 04**

| | |
|---|---|
| ಹೆಸರು | **ಹರೀಶ್** |
| ತಂದೆಯ ಹೆಸರು | **ಮೂರ್ತಪ್ಪ** |
| ವಯಸ್ಸು | **34** |
| ಉದ್ಯೋಗ | **ಅಡಿಗೆ ಕೆಲಸ** |
| ವಿಳಾಸ | **ಪೆಮ್ಮನಹಳ್ಳಿ** |

**ದಿನಾಂಕಃ 24-09-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈಗ ಸಾಕ್ಷಿಗೆ ನಿಪಿ-8 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-8(ಸಿ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ನಿಪಿ-2 ನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಪೋಲೀಸರು ನನಗೆ ಕರೆ ಮಾಡಿ ಪೋ. ಠಾಣೆಗೆ ಬರುವಂತೆ ಹೇಳಿದರು. ನಾನು ಪೋಲೀಸ್ ಠಾಣೆಗೆ ಹೋಗಿದ್ದಾಗ, ಪೋಲೀಸರು ನನ್ನಿಂದ ನಿಪಿ-2 ಮತ್ತು 8 ಕ್ಕೆ ಸಹಿಯನ್ನು ಪಡೆದುಕೊಂಡರು. ಪೋಲೀಸರು ಯಾವ ವಿಷಯಕ್ಕಾಗಿ ನನ್ನಿಂದ ಸಹಿಯನ್ನು ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ ಮತ್ತು ನಾನು ನಿಪಿ-2 ಮತ್ತು 8 ನ್ನು ಓದಿರುವುದಿಲ್ಲ. ನನ್ನನ್ನು ಹೊರತುಪಡಿಸಿ ನಿಪಿ-2 ಮತ್ತು 8 ಕ್ಕೆ ಯಾರು ಸಹಿಯನ್ನು ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ**

**ಮಹಿತಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.11-10-2021 ರಂದು ಚಾಸಾ-5 ರವರು ಪಂಚನಾಮೆಗೆ ಸಹಕರಿಸುವಂತೆ ಹೇಳಿ ನಿಮಗೆ, ಪ್ರಾಸಾ-1 ರಿಂದ 3 ರವರಿಗೆ ನಿಪಿ-8 ರಂತೆ ನೋಟಿಸ್ ನ್ನು ನೀಡಿದ್ದರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಅದೇ ದಿನದಂದು ಮದ್ಯಾಹ್ನ 3 ರಿಂದ 4 ಗಂಟೆ ಸಮಯದಲ್ಲಿ ಪೋಲೀಸರು ಕೃತ್ಯ ನಡೆದ ಸ್ಥಳದಲ್ಲಿ ನಿಪಿ-2 ರಂತೆ ಪಂಚನಾಮೆಯನ್ನು ಮಾಡಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-2 ಕ್ಕೆ ನಿಮ್ಮ ಜೊತೆ ಪ್ರಾಸಾ-1 ರಿಂದ 3 ರವರು ಸಹಿಯನ್ನು ಮಾಡಿರುತ್ತಾರೆ ಎಂದರೆ ಸಾಕ್ಷಿಯು ತಾನು ನಿಪಿ-2 ಕ್ಕೆ ಪೋಲೀಸ್ ಠಾಣೆಯಲ್ಲಿ ತನ್ನ ಸಹಿಯನ್ನು ಮಾಡಿದ್ದೇನೆ ಎನ್ನುತ್ತಾರೆ. ಈಗ ಸಾಕ್ಷಿಗೆ ನಿಪಿ-3 ನ್ನು ತೋರಿಸಿದ್ದು, ಅದನ್ನು ಪಂಚನಾಮೆ ಮಾಡುವ ಸಮಯದಲ್ಲಿ ತೆಗೆಯಲಾಗಿದೆ ಎಂದರೆ ಸಾಕ್ಷಿಯು ಪೋಲೀಸರು ತನ್ನನ್ನು ಕರೆದುಕೊಂಡು ಹೋಗಿ ಫೋಟೋವನ್ನು ತೆಗೆಸಿದರು ಎನ್ನುತ್ತಾರೆ. ಈಗ ಸಾಕ್ಷಿಗೆ ನಿಪಿ-4 ರಿಂದ 7 ನ್ನು ತೋರಿಸಿದ್ದು, ಅದನ್ನು ಪಂಚನಾಮೆ ಮಾಡುವ ಸಮಯದಲ್ಲಿ ತೆಗೆಯಲಾಗಿದೆ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನಿಪಿ-2 ಮತ್ತು 8 ರಲ್ಲಿ ಇರುವ ವಿಷಯವನ್ನು ಪೋಲೀಸರು ನಿಮಗೆ ಓದಿ ತಿಳಿಸಿದ ನಂತರ ನೀವು ಅರ್ಥ ಮಾಡಿಕೊಂಡು ನಿಮ್ಮ ಸಹಿಯನ್ನು ಮಾಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿಗಳ ಪರ ಶ್ರೀ. ಎಂ. ಎನ್ , ವಕೀಲರಿಂದಃ-**

ನಿಪಿ-8 ರ ನೋಟಿಸ್ ನ್ನು ನನಗೆ ಯಾವ ದಿನಾಂಕದಂದು ನೀಡಿದರು ಎಂದು ಗೊತ್ತಿಲ್ಲ. ನಿಪಿ-8 ನ್ನು ಯಾವ ವಿಚಾರಕ್ಕಾಗಿ ನನಗೆ ನೀಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ರ ಫೋಟೋವನ್ನು ಯಾವ ಸರ್ವೆ ನಂಬರ್ ನ ಜಮೀನಿನಲ್ಲಿ ಮತ್ತು ಯಾವ ಕಾರಣಕ್ಕಾಗಿ ತೆಗೆಯಲಾಗಿದೆ ಎಂದು ನಿಮಗೆ ಗೊತ್ತಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -**
**ಚಾಸಾ - 01 / ಪ್ರಾಸಾ - 01**

| | |
|---|---|
| ಹೆಸರು | |
| ತಂದೆಯ / ಗಂಡನ ಹೆಸರು | |
| ವಯಸ್ಸು | |
| ಉದ್ಯೋಗ | ವ್ಯವಸಾಯ |
| ವಿಳಾಸ | |

ದಿನಾಂಕಃ **07-03-2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ -**

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮ2ವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**
**ಪಾಟೀ ಸವಾಲು- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

**ಪಾಟೀ ಸವಾಲು - ಆರೋಪಿ ಪರ ಶ್ರೀ.** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಮರು ವಿಚಾರಣೆ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**